# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ
(ಮುಂದುವರೆದ ಉಪವೇಶನಗಳು)

**ಕಾರ್ಯಕಲಾಪಗಳ ಪಟ್ಟಿ**
ಗುರುವಾರ, ದಿನಾಂಕ:12ನೇ ಮಾರ್ಚ್, 2026
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

*****

## 1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

## 2. ಶೂನ್ಯವೇಳೆ ಪ್ರಸ್ತಾವನೆಗಳು

## 3. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಎಸ್.ವ್ಹಿ. ಸಂಕನೂರ** ಅವರು ರಾಜ್ಯದ ಅನುದಾನಿತ ಶಿಕ್ಷಣ ಸಂಸ್ಥೆಯಲ್ಲಿ 2006ರ ಪೂರ್ವದಲ್ಲಿ ನೇಮಕಗೊಂಡು ನಂತರ ಅನುದಾನಕ್ಕೆ ಒಳಪಟ್ಟಿರುವ ಹಾಗೂ 2006ರ ನಂತರ ನೇಮಕಗೊಂಡ ಸಿಬ್ಬಂದಿಗೆ ಪಿಂಚಣಿ ಸೌಲಭ್ಯ ಸಿಗದೆ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವ ಬಗ್ಗೆ **ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ** ಸಚಿವರ ಗಮನ ಸೆಳೆಯುವುದು.

2. **ಶ್ರೀ ಗೋವಿಂದ ರಾಜು** ಅವರು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಹೂವು ಬೆಳೆಯುವ ರೈತರಿಗೆ ಆಗುತ್ತಿರುವ ನಷ್ಟ ತಪ್ಪಿಸಲು ಚಿಕ್ಕಬಳ್ಳಾಪುರದ ನಂದಿ ಕ್ರಾಸ್ ಬಳಿ 46 ಎಕರೆ ಪ್ರದೇಶದಲ್ಲಿ ಹೈಟೆಕ್ ಹೂವಿನ ಮಾರುಕಟ್ಟೆ 'ಅಂತರಾಷ್ಟ್ರೀಯ ಮಟ್ಟದ ಶೈತ್ಯಾಗಾರ' ಸ್ಥಾಪಿಸುವ ಬಗ್ಗೆ **ಮಾನ್ಯ ಕೃಷಿ** ಸಚಿವರ ಗಮನ ಸೆಳೆಯುವುದು.

3. **ಶ್ರೀ ಬಸನಗೌಡ ಬಾದರ್ಲಿ** ಅವರು ಸಿಂಧನೂರು ಹಾಗೂ ಸುತ್ತಮುತ್ತಲಿನ ತಾಲ್ಲೂಕುಗಳ ರೈತರುಗಳು ಬೆಳೆ ಸಮೀಕ್ಷೆ ಅರ್ಜಿಗಳಲ್ಲಿ ಜೋಳ ಬೆಳೆದಿರುವುದಾಗಿ ತಪ್ಪು ಮಾಹಿತಿಯನ್ನು ನಮೂದಿಸಿ ಜೋಳ ಖರೀದಿ ಕೇಂದ್ರಗಳಲ್ಲಿ ಜೋಳ ಮಾರಾಟಕ್ಕೆ ಹೆಸರುಗಳನ್ನು ನೊಂದಾಯಿಸುತ್ತಿದ್ದು, ಇದರಿಂದಾಗಿ ನೈಜ ಜೋಳ ಬೆಳೆಯುವ ರೈತರು ಸಂಕಷ್ಟಕ್ಕೀಡಾಗಿರುವ ಬಗ್ಗೆ **ಮಾನ್ಯ ಕಂದಾಯ** ಸಚಿವರ ಗಮನ ಸೆಳೆಯುವುದು.

4. **ಶ್ರೀ ಎಂ. ನಾಗರಾಜು** ಅವರು ಬೆಳಗಾವಿಯಲ್ಲಿ ಐ.ಟಿ. ಮತ್ತು ಬಿ.ಟಿ. ಪಾರ್ಕ್ ಸ್ಥಾಪಿಸಲು ಒತ್ತುನೀಡುವುದರೊಂದಿಗೆ ಇನ್ನಷ್ಟು ಉದ್ಯಮಗಳು ಕಾರ್ಯಚಟುವಟಿಕೆಗಳನ್ನು ಪ್ರಾರಂಭಿಸುವ ಕುರಿತು ಹಾಗೂ ಉತ್ತರ ಕರ್ನಾಟಕದ ಭಾಗದ ಯುವಜನತೆಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ** ಸಚಿವರ ಗಮನ ಸೆಳೆಯುವುದು.

**4. ನಿಯಮ 330ರ ಮೇರೆಗೆ**

1. **ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್, ಮಾನ್ಯ ಶಾಸಕರುಗಳಾದ ಶ್ರೀ ಶಶಿಲ್ ಜಿ. ನಮೋಶಿ, ಶ್ರೀಮತಿ ಭಾರತಿ ಶೆಟ್ಟಿ, ಶ್ರೀ ಶರವಣ ಟಿ.ಎ. ಶ್ರೀ ಸಿ.ಟಿ. ರವಿ ಹಾಗೂ ಇತರರು** ರಾಜ್ಯದಲ್ಲಿ ವಿವಿಧ ಇಲಾಖೆಗಳು, ವಿಶ್ವವಿದ್ಯಾಲಯಗಳು ಹಾಗೂ ನಿಗಮ/ಮಂಡಳಿಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ವಿಳಂಬವಾಗುತ್ತಿರುವ ಕುರಿತು ಪ್ರಸ್ತಾಪಿಸುವುದು **(ಮಾನ್ಯ ಮುಖ್ಯಮಂತ್ರಿಗಳು)**

2. **ಶ್ರೀಮತಿ ಹೇಮಲತಾ ನಾಯಕ** ಅವರು ಕೊಪ್ಪಳ ನಗರದ ಹುಲಿಕೆರೆಯ ಮೂಲ ಪ್ರದೇಶ ಹಾಗೂ ಸುತ್ತಮುತ್ತಲಿನ ಬಫರ್ ಜೋನ್ ಪ್ರದೇಶದ ಅತಿಕ್ರಮಣ ತಡೆಗಟ್ಟಲು ಮರುಅಳತೆ ಮಾಡಿಸಿ ನಿಖರ ಗಡಿ ಗುರುತಿಸುವುದು ಮತ್ತು ಅತಿಕ್ರಮಣ ಕುರಿತು ಸಮಗ್ರ ವರದಿ ಸಿದ್ಧಪಡಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು)**

3. **ಶ್ರೀಯುತರುಗಳಾದ ರಮೇಶ್ ಬಾಬು, ಐವನ್ ಡಿ'ಸೋಜಾ, ಶಿವಕುಮಾರ್ ಕೆ., ರಾಮೋಜಿ ಗೌಡ, ಜಗದೇವ್ ಗುತ್ತೇದಾರ್ ಹಾಗೂ ರಾಜೇಂದ್ರ ರಾಜಣ್ಣ** ಅವರುಗಳು ಇಂಧನ ಮತ್ತು ಅಡಿಗೆ ಅನಿಲಗಳ ಮಾರಾಟದಲ್ಲಿ ಕೇಂದ್ರ ಸರ್ಕಾರದ ನಿಯಂತ್ರಣವಿಲ್ಲದ ಕಾರಣ ಯುದ್ಧದ ಹೆಸರಲ್ಲಿ ಕಪ್ಪು ಮಾರುಕಟ್ಟೆಯಲ್ಲಿ ಹೆಚ್ಚಿನ ದರಕ್ಕೆ ಮಾರಾಟ ಆಗುತ್ತಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು)**

4. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಕೃಷ್ಣ ಮೇಲ್ದಂಡೆ ಯೋಜನೆಗೆ ಒಳಪಡುವ ಸಂತ್ರಸ್ಥ ರೈತ ಕುಟುಂಬಗಳಿಗೆ ಪುನರ್ ವಸತಿ ಮತ್ತು ಮೂಲಭೂತ ಸೌಕರ್ಯವನ್ನು ಒದಗಿಸಲು ಸರ್ಕಾರ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಉಪಮುಖ್ಯಮಂತ್ರಿಯವರು)**

5. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು 2017-18 ರಿಂದ 2023-24ರ ಅವಧಿಯಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್(ನಿ)ಗಳಲ್ಲಿ ನಡೆದಿರುವ ಬಹುಕೋಟಿ ಹಣ ವಂಚನೆ ಹಾಗೂ ನಿಯಮ ಮೀರಿ ಸಾಲ ಹಂಚಿಕೆಯಿಂದ ಸಾರ್ವಜನಿಕ ಹಣ ದುರುಪಯೋಗವಾಗಿರುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಮುಖ್ಯಮಂತ್ರಿಯವರು)**

6. **ಶ್ರೀಮತಿ ಭಾರತಿ ಶೆಟ್ಟಿ** ಅವರು ರಾಜ್ಯದಲ್ಲಿ ಮಂಗಳಮುಖಿಯರು ಸಮಾಜದ ಮುಖ್ಯವಾಹಿನಿಯಲ್ಲಿ ಶೋಷಣೆಗಳಿಗೆ ಒಳಪಡುತ್ತಿರುವುದರಿಂದ ಅವರ ಬದುಕನ್ನು ಸರ್ವಾಂಗೀಣವಾಗಿ ಅಭಿವೃದ್ಧಿಪಡಿಸಲು ಮತ್ತು ಸದರಿಯವರ ಮೇಲೆ ನಡೆಯುತ್ತಿರುವ ಶೋಷಣೆಯನ್ನು ತಪ್ಪಿಸಲು ಪ್ರತ್ಯೇಕ ನಿರ್ದೇಶನಾಲಯವನ್ನು ಹಾಗೂ ಗೃಹ ಇಲಾಖೆಯಲ್ಲಿ ಪ್ರತ್ಯೇಕ ಸೆಲ್‌ನ್ನು ಸ್ಥಾಪಿಸುವ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಗೃಹ ಸಚಿವರು)**

## ೫. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ. ರಾಜ್ಯದ ಔಷಧ ಉಗ್ರಾಣಗಳಲ್ಲಿ ಔಷಧಗಳ ಕೊರತೆಯಿಂದ ಆಗುತ್ತಿರುವ ತೊಂದರೆಗಳ ಬಗ್ಗೆ ದಿನಾಂಕ:09.03.2026ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:74(578+629)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಡಾ:ಧನಂಜಯ ಸರ್ಜಿ** ಮತ್ತು **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ**. ಅವರುಗಳಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. ಅವಳಿ ಜಿಲ್ಲೆಗಳಲ್ಲಿ ಪೂರಕ ಕೈಗಾರಿಕೆಗಳನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಸರ್ಕಾರವು ಕಾರ್ಯಕ್ರಮಗಳನ್ನು ರೂಪಿಸಿರುವ ಬಗ್ಗೆ ದಿನಾಂಕ:10.03.2026ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:76(812)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪಿ.ಹೆಚ್. ಪೂಜಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

## 6. ವಿತ್ತೀಯ ಕಾರ್ಯಕಲಾಪ

2026-27ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

(ಮೂರನೇ ದಿನ)

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
www.kla.kar.nic.in/council/council.htm